## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಸಣ್ಣವೀರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕೂಡ್ಲಿಗಿ ಮತ್ತು ಶ್ರೀ ಸೈಯದ್ ಹಜರತ್ ಷಾಹಾ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕೂಡ್ಲಿಗಿ ಹಾಗೂ ಶ್ರೀ ಧನುಂಜಯ ನಾಯ್ಡು, ದ್ವಿ.ದ.ಸ. ತಾಲ್ಲೂಕ ಪಂಚಾಯಿತಿ, ಕೂಡ್ಲಿಗಿ ಇವರುಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ರವರ ಪತ್ರ ಸಂಖ್ಯೆ: ಜಿಪಂಬ/ಸಿಬ್ಬಂದಿ(4)/ಸಿಸಿಎ34/ 2013-14 ದಿನಾಂಕ:23-1-2014.
2. ಸರ್ಕಾರದ ಕಾರಣ ಕೇಳುವ ನೋಟೀಸು ದಿನಾಂಕ:18-02-2014.
3. ಆಪಾದಿತ ಅಧಿಕಾರಿ/ನೌಕರರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳು ದಿನಾಂಕ: 6-3-2014.

-------

**ಪ್ರಸ್ತಾವನೆ:**

ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕ ಪಂಚಾಯಿತಿಯಲ್ಲಿ, ಲೆಕ್ಕ ಶೀರ್ಷಿಕೆ 2515-00-102-0-61 ರಡಿ ಒಟ್ಟಾರೆ 16 ಡಿ.ಸಿ. ಬಿಲ್ಲುಗಳ ಮೂಲಕ ಖಜಾನೆಯಿಂದ ರೂ. 5,09,473-00 ಗಳ ಮೊತ್ತವನ್ನು ಡ್ರಾ ಮಾಡಿ ಕೂಡ್ಲಿಗಿ ತಾಲ್ಲೂಕ ಪಂಚಾಯಿತಿಯ ದ್ವಿತೀಯ ಸಹಾಯಕರಾದ ಶ್ರೀ ಧನಂಜಯ ನಾಯ್ಡು, ಇವರು ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಕೂಡ್ಲಿಗಿ ಶಾಖೆಯಲ್ಲಿ ಹೊಂದಿರುವ ಅವರ ಸ್ವಂತ ಉಳಿತಾಯ ಖಾತೆಗೆ ಜಮಾ ಮಾಡಿ ಆ ಮೂಲಕ ನೇರವಾಗಿ ಸರ್ಕಾರದ ಹಣ ದುರುಪಯೋಗಪಡಿಸಿ ಕೊಂಡಿರುವ ಆಪಾದನೆಗೆ ಸಂಬಂಧಿಸಿದಂತೆ, ಈ ಕೆಳಕಂಡ ಅಧಿಕಾರಿ/ನೌಕರರುಗಳಾದ:-

1. ಶ್ರೀ ಸಣ್ಣವೀರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕೂಡ್ಲಿಗಿ.
2. ಶ್ರೀ ಸೈಯದ್ ಹಜರತ್ ಷಾಹಾ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕೂಡ್ಲಿಗಿ.
3. ಶ್ರೀ ಧನುಂಜಯ ನಾಯ್ಡು, ದ್ವಿ.ದ.ಸ. ತಾಲ್ಲೂಕ ಪಂಚಾಯಿತಿ, ಕೂಡ್ಲಿಗಿ ತಾಲ್ಲೂಕು ಪಂಚಾಯಿತಿ.

ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ)1957ರ ನಿಯಮ-11 ರಡಿ ಶಿಸ್ತುಕ್ರಮ ಜರುಗಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸರ್ಕಾರದ ನೋಟೀಸಿನಲ್ಲಿ ಅನುಬಂಧ-1 ರಿಂದ 4 ನ್ನು ಒಳಗೊಂಡ ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಆಪಾದಿತ ಅಧಿಕಾರಿ / ನೌಕರರುಗಳು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರುಗಳ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಸದರಿ ಆಪಾದಿತ ಅಧಿಕಾರಿ / ನೌಕರರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು ಅವರುಗಳು ಸಲ್ಲಿಸಿರುವ ವಿವರಣೆಗಳು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿ / ನೌಕರರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ನಿರ್ಧರಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 14 ವಿಸೇಬಿ 2014, ಬೆಂಗಳೂರು, ದಿನಾಂಕ:03-04-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಈ ಕೆಳಕಂಡ ಅಧಿಕಾರಿ/ನೌಕರರುಗಳಾದ:-

1. ಶ್ರೀ [illegible]
ಪಂಚಾಯಿತಿ ಕೂಡ್ಲಿಗಿ.
2. ಶ್ರೀ ಸೈಯದ್ ಹಜರತ್ ಷಾಹಾ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕೂಡ್ಲಿಗಿ.
3. ಶ್ರೀ ಧನುಂಜಯ ನಾಯ್ಕು, ದ್ವಿ.ದ.ಸ. ತಾಲ್ಲೂಕ ಪಂಚಾಯಿತಿ, ಕೂಡ್ಲಿಗಿ.

ಇವರುಗಳ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ–11ರ ಅನುಸಾರ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ–13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆಗೆ ಆದೇಶಿಸಿದೆ.

ಈ ಇಲಾಖಾ ವಿಚಾರಣೆ ನಡೆಸಲು ಶ್ರೀ ಡಿ.ವಿ.ಶೇಟ್, ನಿವೃತ್ತ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಆದಷ್ಟು ಬೇಗ ಇಲಾಖಾ ವಿಚಾರಣೆಯನ್ನು ಕೈಗೊಂಡು ಮೂರು ತಿಂಗಳ ಒಳಗಾಗಿ ವಿಚಾರಣೆಯನ್ನು ಪೂರ್ಣಗೊಳಿಸಿ ಅಭಿಲೇಖಗಳೊಂದಿಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಇಲಾಖಾ ವಿಚಾರಣೆಯನ್ನು ನಡೆಸಲು ಧಾರವಾಡ ಜಿಲ್ಲಾ ಪಂಚಾಯತ್ ಕಛೇರಿಯಲ್ಲಿ ಸ್ಥಳಾವಕಾಶ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ರವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ–ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ/ಧಾರವಾಡ.
3. ಶ್ರೀ ಡಿ.ವಿ.ಶೇಟ್, ನಿವೃತ್ತ ನ್ಯಾಯಾಧೀಶರು, ಆದರ್ಶ ಸೈದಾಪೂರ, ಧಾರವಾಡ.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ ಬಳ್ಳಾರಿ (ಮಂಡನಾಧಿಕಾರಿ).
5. ಸಂಬಂಧಿಸಿದ ಅಧಿಕಾರಿಗಳಿಗೆ.

ಪ್ರತಿಯನ್ನು :
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ(ಪಂ.ರಾಜ್) / ಅಪರ ಕಾರ್ಯದರ್ಶಿ(ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Sbp/-